## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ ವ್ಯಾಪ್ತಿಯಲ್ಲಿನ ಯೋಜನೆಗಳ ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್‌ನಿರ್ಮಾಣಕ್ಕೆ ಸಂಬಂಧಿಸಿದ ಪ್ರಸ್ತಾವನೆಗಳಿಗೆ ಅನುಮೋದನೆ ನೀಡುವ ಅಧಿಕಾರವನ್ನು ಪ್ರತ್ಯಾಯೋಜಿಸುವ ಕುರಿತು.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ಜಸಂಇ 35 ವಿಬ್ಯಾಇ 2016, ದಿನಾಂಕ:20.08.2016.
2. ಜಿಲ್ಲಾಧಿಕಾರಿ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಪತ್ರ ಸಂಖ್ಯೆ: ಎಲ್‌ಎಕ್ಯೂ: ಹೆಚ್‌ಎಸ್‌ಡಿ:ಸಿಆರ್-10/2017-18, ದಿನಾಂಕ: 26.07.2017.
3. ಆಯುಕ್ತರು, ಪು, ಪು ಮತ್ತು ಭೂಸ್ವಾಧೀನ, ಕೃಷ್ಣಾ ಮೇಲ್ದಂಡೆ ಯೋಜನೆ, ಬಾಗಲಕೋಟೆ ರವರ ಪತ್ರ ಸಂಖ್ಯೆ: ಆಯುಕ್ತರು/ಪುಪು/ಕಾಮಗಾರಿ/2017-18/267, ದಿನಾಂಕ: 31.08.2017.

* * * * *

**ಪ್ರಸ್ತಾವನೆ:**

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆ, ಭದ್ರಾ ಮೇಲ್ದಂಡೆ ಯೋಜನೆಗಳಿಗೆ ಸಂಬಂಧಿಸಿದಂತೆ ಮತ್ತು ಉದ್ದೇಶಿತ ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ಗ್ರಾಮಾಂತರ, ಚಿತ್ರದುರ್ಗ, ಚಿಕ್ಕಮಗಳೂರು, ಹಾಸನ, ದಾವಣಗೆರೆ ಮತ್ತು ತುಮಕೂರು ಜಿಲ್ಲೆಗಳ ಬರಪೀಡಿತ ಪ್ರದೇಶಗಳಿಗೆ ಉಪಯುಕ್ತವಾಗುವಂತಹ/ ಪೂರಕವಾಗಿರುವಂತಹ ಮತ್ತು ಚಾಲ್ತಿಯಲ್ಲಿರುವಂತೆ ಇತರೇ ಯೋಜನಾ ಕಾಮಗಾರಿಗಳನ್ನು ನಿರ್ವಹಿಸಲು ಮೇಲೆ (1) ರಲ್ಲಿ ಓದಲಾದ ಆದೇಶದಲ್ಲಿ ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತವನ್ನು ರಚಿಸಲಾಗಿದ್ದು, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ ವ್ಯಾಪ್ತಿಯಲ್ಲಿ ಬರುವ ಭದ್ರಾ ಮೇಲ್ದಂಡೆ ಯೋಜನೆಗೆ ಸಂಬಂಧಿಸಿದ ಭೂಸ್ವಾಧೀನ ಹಾಗೂ ಪುನರ್ವಸತಿ ಪ್ರಸ್ತಾವನೆಗಳಿಗೆ ಅನುಮೋದನೆ ನೀಡುವುದನ್ನು ಸರ್ಕಾರದ ಕಂದಾಯ ಇಲಾಖೆಯಲ್ಲಿಯೇ ನಿರ್ವಹಿಸಲು ಸೂಕ್ತ ಆದೇಶ ಹೊರಡಿಸುವಂತೆ ಮೇಲೆ ಓದಲಾದ (2) ರ ಪತ್ರದಲ್ಲಿ ಚಿತ್ರದುರ್ಗ ಜಿಲ್ಲೆಯ ಜಿಲ್ಲಾಧಿಕಾರಿಯವರು ಕೋರಿರುತ್ತಾರೆ.

ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತದ ವ್ಯಾಪ್ತಿಯ ಭೂಸ್ವಾಧೀನ ಪ್ರಕರಣಗಳನ್ನು ನಿರ್ದಿಷ್ಟವಾಗಿ ಇಂತಹುದೇ ಕಛೇರಿಯಿಂದ ಅನುಮೋದಿಸಲ್ಪಡಬೇಕೆಂದು ಸರ್ಕಾರದಿಂದ ಆದೇಶಿಸಿಲ್ಲವಾದ್ದರಿಂದ, ಈ ನಿಗಮದ ಪ್ರಕರಣಗಳನ್ನು ಸರ್ಕಾರಕ್ಕೆ ಸಲ್ಲಿಸಿ ಅನುಮೋದನೆ ಪಡೆಯಲು ಮೇಲೆ ಓದಲಾದ (3) ರಲ್ಲಿ ಆಯುಕ್ತರು ತಿಳಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಕಂಇ 116 ಆರ್‌ಇಹೆಚ್ 2017, ಬೆಂಗಳೂರು, ದಿನಾಂಕ: 11.12.2017.**

ಪ್ರಸ್ತಾವನೆಯಲ್ಲಿನ ವಿವರಗಳ ಹಿನ್ನಲೆಯಲ್ಲಿ, ವಿಶ್ವೇಶ್ವರಯ್ಯ ಜಲನಿಗಮ ನಿಯಮಿತ ವ್ಯಾಪ್ತಿಯಲ್ಲಿ ಬರುವ ಯೋಜನೆಗಳಿಗೆ ಸಂಬಂಧಿಸಿದ ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್‌ನಿರ್ಮಾಣದ ಪ್ರಸ್ತಾವನೆಗಳನ್ನು ನಿಯಮಾನುಸಾರ ಪರಿಶೀಲಿಸಿ ಅನುಮೋದನೆ ನೀಡುವುದನ್ನು ತಕ್ಷಣದಿಂದ ಜಾರಿಗೆ

ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸರ್ಕಾರದ ಕಂದಾಯ ಇಲಾಖೆಯಲ್ಲಿಯೇ ನಿರ್ವಹಿಸಲು ಸೂಚಿಸಿದೆ. ಹಾಗೆಯೇ, ಸಂಬಂಧಿಸಿದ ಅಧಿಕಾರಿಗಳು ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಜಲಸಂಪನ್ಮೂಲ ಇಲಾಖೆಯ ಟಿಪ್ಪಣಿ ಸಂಖ್ಯೆ:ಜಸಂಇ 212 ವಿಬ್ಯಾಇ 2017, ದಿನಾಂಕ: 23.10.2017 ರಲ್ಲಿ ನೀಡಿರುವ ಅಭಿಪ್ರಾಯದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

M. L. Varalakshmi 11/12/17
(ಎಂ.ಎಲ್.ವರಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-2(ಪ್ರ)
ಕಂದಾಯ ಇಲಾಖೆ (ಪು & ಪು).

ಇವರಿಗೆ:

1. ಮಹಾಲೇಖಪಾಲರು, ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕಪರಿಶೋಧನೆ/ ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ/ ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ/ ಜಲಸಂಪನ್ಮೂಲ ಇಲಾಖೆ.
3. ಆಯುಕ್ತರು, ರಾಜ್ಯ ಪುನರ್ವಸತಿ ಮತ್ತು ಪುನರ್‌ನಿರ್ಮಾಣ ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ (ಪು & ಪು), ಕಂದಾಯ ಇಲಾಖೆ.
4. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ/ ಮೈಸೂರು ವಿಭಾಗ/, ಬೆಳಗಾವಿ ವಿಭಾಗ/ ಕಲಬುರ್ಗಿ ವಿಭಾಗ.
5. ಆಯುಕ್ತರು (ಪು, ಪು ಮತ್ತು ಭೂಸ್ವಾಧೀನ), ಕೃಷ್ಣಾ ಮೇಲ್ದಂಡೆ ಯೋಜನೆ, ನವನಗರ, ಬಾಗಲಕೋಟೆ.
6. ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ಗ್ರಾಮಾಂತರ, ಚಿತ್ರದುರ್ಗ, ಚಿಕ್ಕಮಗಳೂರು, ಹಾಸನ, ದಾವಣಗೆರೆ, ಶಿವಮೊಗ್ಗ ಮತ್ತು ತುಮಕೂರು ಜಿಲ್ಲೆಗಳು.
7. ವ್ಯವಸ್ಥಾಪಕ ನಿರ್ದೇಶಕರು, ವಿಶ್ವೇಶ್ವರಯ್ಯ ಜಲನಿಗಮ ನಿಯಮಿತ, ಕಾಫಿಬೋರ್ಡ್ ಕಟ್ಟಡ, ಬೆಂಗಳೂರು.
8. ಮಾನ್ಯ ಕಂದಾಯ ಸಚಿವರು/ ಮಾನ್ಯ ಜಲಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9. ಆಡಳಿತಾಧಿಕಾರಿಗಳು ಹಾಗೂ ಅಪರ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ಗ್ರಾಮಾಂತರ, ಚಿತ್ರದುರ್ಗ, ಚಿಕ್ಕಮಗಳೂರು, ಹಾಸನ, ದಾವಣಗೆರೆ, ಶಿವಮೊಗ್ಗ ಮತ್ತು ತುಮಕೂರು ಜಿಲ್ಲೆಗಳು (ಆಯಾ ಜಿಲ್ಲಾಧಿಕಾರಿಗಳ ಮುಖಾಂತರ).
10. ಭೂಸ್ವಾಧೀನಾಧಿಕಾರಿ ಹಾಗೂ ಉಪವಿಭಾಗಾಧಿಕಾರಿಗಳು/ ವಿಶೇಷ ಭೂಸ್ವಾಧೀನಾಧಿಕಾರಿಗಳಿಗೆ (ಸಂಬಂಧಿಸಿದ ಜಿಲ್ಲಾಧಿಕಾರಿಗಳ ಮುಖಾಂತರ).
11. ಸರ್ಕಾರದ ಉಪ ಕಾರ್ಯದರ್ಶಿಗಳು, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ/ ಭೂಸ್ವಾಧೀನ, ಕಂದಾಯ ಇಲಾಖೆ.
12. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಭೂಸ್ವಾಧೀನ-1 ಮತ್ತು 3/ ಭೂಸ್ವಾಧೀನ-2, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ-1/ ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ-2, ಕಂದಾಯ ಇಲಾಖೆ.
13. ಸಂಬಂಧಿಸಿದ ಶಾಖಾಧಿಕಾರಿಗಳಿಗೆ.
14. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.